ಜೆಎಸ್‌ಎಸ್ ಮಹಾವಿದ್ಯಾಪೀಠ
ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿ, ಮೈಸೂರು

# ಶಿವಾನುಭವ ದಾಸೋಹ–317

**28 ಸೆಪ್ಟೆಂಬರ್ 2024 * ಶನಿವಾರ * ಸಂಜೆ 6.00**

ಶಿವಶ್ರೀ ವಿದ್ಯಾರ್ಥಿನಿಯರ ನಿಲಯ
ನಂ. 1375, ಬಿ.ಬಿ. ಗಾರ್ಡನ್, ಕೆ.ಆರ್. ಮೊಹಲ್ಲಾ, ಮೈಸೂರು

---

**ದಿವ್ಯ ಆಶೀರ್ವಾದ**

**ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳು**
ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠ, ಶ್ರೀ ಸುತ್ತೂರು ಕ್ಷೇತ್ರ

**ಅಧ್ಯಕ್ಷತೆ**

**ಡಾ. ಶ್ರೀ ಶರತ್‌ಚಂದ್ರ ಸ್ವಾಮಿಗಳು**
ಶ್ರೀ ಕುಂದೂರು ಮಠ, ಮೈಸೂರು

**ಉಪನ್ಯಾಸ**

**ಶ್ರೀ ಮ.ಗು. ಸದಾನಂದಯ್ಯ**
ಅಧ್ಯಕ್ಷರು, ಅಖಿಲ ಭಾರತ ಶರಣ ಸಾಹಿತ್ಯ ಪರಿಷತ್ತು, ನಗರ ಘಟಕ, ಮೈಸೂರು

**ವಿಷಯ : ಅನುಭವ ಮಂಟಪ ಒಂದು ಚಿಂತನೆ**

**ವಚನ ಗಾಯನ**

**ಕು. ಎನ್. ಚೂಡಾಮಣಿ**
ಮೈಸೂರು

**ತಮಗೆ ಆದರದ ಸ್ವಾಗತ**

**ಪ್ರಾಯೋಜಕರು**

**ಶರಣೆ ಎಂ.ಎ. ನೀಲಾಂಬಿಕಾ**
ನಿವೃತ್ತ ಉಪನ್ಯಾಸಕರು
# 242, ಉತ್ತರಾದಿ ಮಠದ ರಸ್ತೆ, ಖಿಲ್ಲೆ ಮೊಹಲ್ಲಾ, ಮೈಸೂರು 570 004

ಸುತ್ತೂರು ಜಗದ್ಗುರು ಶ್ರೀ ವೀರಸಿಂಹಾಸನ ಮಹಾಸಂಸ್ಥಾನ ಮಠದ 23ನೇ ಪೀಠಾಧಿಪತಿಗಳಾದ ಪರಮಪೂಜ್ಯ ಜಗದ್ಗುರು ಡಾ. ಶ್ರೀ ಶಿವರಾತ್ರಿ ರಾಜೇಂದ್ರ ಮಹಾಸ್ವಾಮಿಗಳವರು ಪ್ರಸಾದನಿಲಯಗಳು ಹಾಗೂ ಶಿಕ್ಷಣಸಂಸ್ಥೆಗಳನ್ನು ಸ್ಥಾಪಿಸುವ ಮೂಲಕ ಜನತೆಯ ಸರ್ವಾಂಗೀಣ ಉನ್ನತಿಗೆ ಕಾರಣರಾದರು. ಶಿಕ್ಷಣದ ಮೂಲಕ ಸಾಮಾಜಿಕ ಅಭಿವೃದ್ಧಿ ಸಾಧ್ಯ ಎಂಬುದನ್ನು ಮನಗಂಡಿದ್ದರು. ಶ್ರೀಗಳವರು ಜಾತಿ, ಮತ, ಪಂಥ, ಧರ್ಮ ಭೇದವಿಲ್ಲದೆ ಅನ್ನದಾಸೋಹ, ಜ್ಞಾನದಾಸೋಹದ ಜೊತೆಗೆ ಜನತೆಯ ಸಮಗ್ರ ಅಭಿವೃದ್ಧಿಗಾಗಿ, ನೈತಿಕತೆ ಹಾಗೂ ಧಾರ್ಮಿಕತೆಗಳ ಪ್ರಸಾರಕ್ಕಾಗಿ, ಹಲವಾರು ದಶಕಗಳ ಹಿಂದೆಯೇ ಶರಣತತ್ತ್ವ ಪ್ರಸಾರ ಸಮಿತಿಯಂಥ ಸಂಸ್ಥೆಗಳ ಮೂಲಕ ಧರ್ಮದಾಸೋಹವನ್ನು ಪ್ರಾರಂಭಿಸಿದರು. 1986ರಲ್ಲಿ ಶರಣ ಸಾಹಿತ್ಯ ಪರಿಷತ್ತು ಹಾಗೂ ಶ್ರೀ ಶಿವರಾತ್ರೀಶ್ವರ ಧಾರ್ಮಿಕ ದತ್ತಿಯನ್ನು ಸ್ಥಾಪಿಸಿ ಆಧ್ಯಾತ್ಮಿಕ ಚಿಂತನೆಗೆ ಹೊಸ ಆಯಾಮವನ್ನು ನೀಡಿದರು.

ಈ ದತ್ತಿಯ ವತಿಯಿಂದ ಪರಮಪೂಜ್ಯ ಜಗದ್ಗುರು ಶ್ರೀ ಶಿವರಾತ್ರಿ ದೇಶಿಕೇಂದ್ರ ಮಹಾಸ್ವಾಮಿಗಳವರ ದಿವ್ಯ ಸಾನ್ನಿಧ್ಯದಲ್ಲಿ ದಿನಾಂಕ 12.5.1996ರಂದು 'ಶಿವಾನುಭವ ದಾಸೋಹ' ಕಾರ್ಯಕ್ರಮವನ್ನು ಪ್ರಾರಂಭಿಸಲಾಯಿತು. ಅಂದಿನಿಂದಲೂ ಪ್ರತಿ ತಿಂಗಳ ಕೊನೆಯ ಶನಿವಾರದಂದು ಈ ಕಾರ್ಯಕ್ರಮವು ನಿರಂತರವಾಗಿ ನಡೆದುಕೊಂಡು ಬರುತ್ತಿದೆ. ಧರ್ಮ, ದರ್ಶನ, ವಚನಸಾಹಿತ್ಯ, ಧರ್ಮಗಳ ತೌಲನಿಕ ವಿವೇಚನೆ, ಜೀವನಕಲೆ ಮೊದಲಾದ ವಿಷಯಗಳನ್ನು ಕುರಿತು ಉಪನ್ಯಾಸ ಏರ್ಪಡಿಸಲಾಗುತ್ತಿದೆ.

**ಡಾ. ಶ್ರೀ ಶರತ್‌ಚಂದ್ರ ಸ್ವಾಮಿಗಳು** ಮೈಸೂರು ಶ್ರೀ ಕುಂದೂರು ಮಠದ ವಿದ್ವಾನ್ ಡಾ. ಶ್ರೀ ಇಮ್ಮಡಿ ಶಿವಬಸವಸ್ವಾಮಿಗಳವರ ಕರಕಮಲ ಸಂಜಾತರು. ಮೈಸೂರು ವಿಶ್ವವಿದ್ಯಾನಿಲಯದ ಸಂಸ್ಕೃತ ಎಂಎ, ಪಿಎಚ್‌ಡಿ ಪದವೀಧರರು. ಕರ್ನಾಟಕ ಸಂಸ್ಕೃತ ವಿಶ್ವವಿದ್ಯಾನಿಲಯದ ಸಹಾಯಕ ಪ್ರಾಧ್ಯಾಪಕರಾಗಿ ಹಾಗೂ ಶೈವಸಿದ್ಧಾಂತದ ಅಧ್ಯಯನ ಮತ್ತು ಸಂಶೋಧನಾ ಕೇಂದ್ರದ ಪ್ರಭಾರ ನಿರ್ದೇಶಕರಾಗಿ ಸೇವೆ ಸಲ್ಲಿಸುತ್ತಿದ್ದಾರೆ. ಕನ್ನಡ, ಸಂಸ್ಕೃತ, ಇಂಗ್ಲಿಷ್, ತಮಿಳು ಮತ್ತು ಹಿಂದಿ ಭಾಷೆಗಳಲ್ಲಿ ಪ್ರಭುತ್ವವುಳ್ಳ ಶ್ರೀಗಳು ಬೌದ್ಧ ಧರ್ಮ ದರ್ಶನ ಸೇರಿದಂತೆ ಹಲವಾರು ಮೌಲಿಕ ಗ್ರಂಥಗಳನ್ನು ರಚಿಸಿರುತ್ತಾರೆ ಹಾಗೂ ವಿಚಾರ ಗೋಷ್ಠಿಗಳಲ್ಲಿ ಸಂಶೋಧನಾ ಪ್ರಬಂಧಗಳನ್ನು ಮಂಡಿಸಿರುತ್ತಾರೆ.

**ಶ್ರೀ ಮ.ಗು. ಸದಾನಂದಯ್ಯನವರು** ಶಿಕಾರಿಪುರ ಸರ್ಕಾರಿ ಪದವಿಪೂರ್ವ ಕಾಲೇಜಿನಲ್ಲಿ ಉಪನ್ಯಾಸಕರಾಗಿ ಸೇವೆ ಆರಂಬಿಸಿದರು. ನಂತರ ಶಿರಾಳಕೊಪ್ಪ ಕಾಲೇಜಿನಲ್ಲಿ ಪ್ರಾಂಶುಪಾಲರಾಗಿ ಸೇವೆ ಸಲ್ಲಿಸಿದರು. ಅನಂತರ ಧಾರವಾಡ, ವಿಜಯಪುರ, ಕಾರವಾರ, ಬೆಳಗಾವಿ ಮತ್ತು ಮೈಸೂರು ಮುಂತಾದ ಕಡೆಗಳಲ್ಲಿ ಕನ್ನಡ ಮತ್ತು ಸಂಸ್ಕೃತಿ ಇಲಾಖೆಯ ಉಪ ನಿರ್ದೇಶಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ.

**ಶರಣೆ ಎಂ.ಎ. ನೀಲಾಂಬಿಕಾರವರು** ಖ್ಯಾತ ನಾಟಕಕಾರ ದಿವಂಗತ ಶ್ರೀ ಸಿ. ಅಂಕಪ್ಪನವರ ಸುಪುತ್ರಿ. ಜೆಎಸ್‌ಎಸ್ ಶಿಕ್ಷಣಸಂಸ್ಥೆಗಳಲ್ಲಿ ಶಿಕ್ಷಕರಾಗಿ ಮತ್ತು ಉಪನ್ಯಾಸಕರಾಗಿ ಸೇವೆ ಸಲ್ಲಿಸಿ ನಿವೃತ್ತರಾಗಿದ್ದಾರೆ. ಉತ್ತಮ ಪ್ರವಚನಕಾರರು, ಶರಣ ಸಾಹಿತ್ಯ-ಸಂಸ್ಕೃತಿಯ ಬಗ್ಗೆ ಅಪಾರ ಅಭಿಮಾನವುಳ್ಳವರು. ನಲವತ್ತಕ್ಕೂ ಹೆಚ್ಚು ಶರಣ ಸಾಹಿತ್ಯದ ಕೃತಿಗಳನ್ನು ರಚಿಸಿದ್ದಾರೆ. ಮೈಸೂರು ಕದಳಿ ಮಹಿಳಾ ವೇದಿಕೆಯ ಅಧ್ಯಕ್ಷರಾಗಿ ಸೇವೆ ಸಲ್ಲಿಸಿದ್ದಾರೆ. ಪ್ರಸ್ತುತ ಶ್ರೀ ಶಿವರಾತ್ರೀಶ್ವರ ಅಕ್ಕನ ಬಳಗದ ಅಧ್ಯಕ್ಷರಾಗಿ ಕಾರ್ಯ ನಿರ್ವಹಿಸುತ್ತಿದ್ದಾರೆ. ಶ್ರೀಮತಿ ಶಕುಂತಲ ಜಯದೇವ ಪ್ರಶಸ್ತಿ ಸೇರಿದಂತೆ ಹಲವಾರು ಪ್ರಶಸ್ತಿ, ಗೌರವಗಳಿಗೆ ಪಾತ್ರರಾಗಿದ್ದಾರೆ.